**1 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಾಗರ**

**ಸಿ.ಸಿ ಸಂಖ್ಯೆ: 768/2023**

**ಸಿ.ಡಬ್ಲ್ಯೂ -4 , ಪಿ.ಡಬ್ಲ್ಯೂ -1**

| | | |
|---|---|---|
| ಸಾಕ್ಷಿದಾರರ ಹೆಸರು | : | ಸುನೀಲ್ |
| ತಂದೆಯ ಹೆಸರು | : | ರುದ್ರಪ್ಪ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ಖಾಸಗಿ ನೌಕರಿ |
| ವಾಸ | : | ನೆಹರು ನಗರ, ಸಾಗರ. |

**ಪ್ರಮಾಣೀಕರಿಸಿದ ದಿನಾಂಕ : 08.07.2026.**

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1. ದಿ:25.03.2022 ರಂದು ಪೊಲೀಸರು ಠಾಣೆಯಲ್ಲಿ ಯಾವುದೋ ದಾಖಲೆಯ ಮೇಲೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ನಾನು ನನ್ನ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಪಂಚನಾಮೆಯ ದೃಢೀಕೃತ ನಕಲನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 1 ಎಂದು ಗುರುತಿಸಲಾಯಿತು. ಸಾಕ್ಷಿಯು 2 ಛಾಯಾಚಿತ್ರಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ 2 ಮತ್ತು 3 ಎಂದು ಗುರುತಿಸಲಾಯಿತು. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪಂಚನಾಮೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲು:- ಸ.ಸ.ಅ. ರವರಿಂದ:-

1. ಈಗ ಓದಿ ಹೇಳಿದ ನಿಪಿ 1 ರಂತೆ ಪೊಲೀಸರು ನನ್ನ ಸಮಕ್ಷಮ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ದಿ:25.03.2022 ರಂದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಹೇಳಿಕೆಯನ್ನು ನಿಪಿ 4 ಎಂದು ಗುರುತಿಸಲಾಯಿತು. ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.</u>

<u>ಮರು ವಿಚಾರಣೆಃ ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**

**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.